**ಕರ್ನಾಟಕ ವಿಧಾನ ಪರಿಷತ್ತು**

**150ನೇ ಅಧಿವೇಶನ-2023**

| ನಿಯಮ-330ರಡಿ ಸೂಚನೆ | |
|---|---|
| ಸೂಚನೆ ನೀಡಿದ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ), ವಿಧಾನ ಪರಿಷತ್ತಿನ ಮಾನ್ಯ ಸದಸ್ಯರು |

**ಸೂಚನೆಯ ವಿಷಯ**

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 2011ನೇ ಸಾಲಿನಲ್ಲಿ ನೇಮಕವಾಗಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳಿಗೆ ಪದೋನ್ನತಿ ನೀಡದೆ ಇರುವ ಕುರಿತು ಪ್ರಸ್ತಾಪಿಸುವುದು.

**ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಹೇಳಿಕೆ**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳ ವೃತ್ತಿ ಪದೋನ್ನತಿ (CAS) ಸಂಬಂಧಿಸಿದಂತೆ, ಎಐಸಿಟಿಇಯು ಕಾಲಕಾಲಕ್ಕೆ ಹೊರಡಿಸುವ ಅಧಿಸೂಚನೆ/ ನಿಯಮಾವಳಿ/ ಆದೇಶ/ ಸ್ಪಷ್ಟೀಕರಣಗಳನ್ನು ಅಳವಡಿಸಿಕೊಂಡು ದಿನಾಂಕ:07.11.2015ರ ಪೂರ್ವದಲ್ಲಿ ವೃತ್ತಿ ಪದೋನ್ನತಿಯನ್ನು ಪಡೆಯಲು ಅರ್ಹರಿರುವ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಬೋಧಕ ವರ್ಗದವರ ದಿನಾಂಕ:01.03.2019ರ ಹಿಂದಿನ ಅವಧಿಯ ಪ್ರಸ್ತಾವನೆಗಳನ್ನು ಸ್ಥಾನೀಕರಣ ಆಯ್ಕೆ ಸಮಿತಿಯ ಮುಂದೆ ಮಂಡಿಸಿ ವಿಷಯ ತಜ್ಞರ ಶಿಫಾರಸ್ಸಿನೊಂದಿಗೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಅದರಂತೆ, ಸದರಿ ಸಹಾಯಕ ಪ್ರಾಧ್ಯಾಪಕರುಗಳಿಗೆ ಆರ್ಥಿಕ ಸೌಲಭ್ಯಗಳೊಂದಿಗೆ ಮಂಜೂರು ಮಾಡುವ ಬಗ್ಗೆ ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಿದ್ದು, ಆರ್ಥಿಕ ಇಲಾಖೆಯು ದಿನಾಂಕ:03.03.2023ರ ಟಿಪ್ಪಣಿಯಲ್ಲಿ ಭವಿಷ್ಯವರ್ತಿಯಾಗಿ ಪದೋನ್ನತಿ ನೀಡುವ ಬಗ್ಗೆ ಕೆಲವು ಸ್ಪಷ್ಟೀಕರಣದೊಂದಿಗೆ ಪರಿಶೀಲಿಸುವಂತೆ ತಿಳಿಸಿರುತ್ತದೆ. ಸದರಿ ಅಂಶಗಳನ್ನು ಪುನರ್ ಪರಿಶೀಲಿಸಿ, ಸದರಿ ಸಹಾಯಕ ಪ್ರಾಧ್ಯಾಪಕರುಗಳಿಗೆ ಪೂರ್ವಾನ್ವಯವಾಗಿ ವೃತ್ತಿ ಪದೋನ್ನತಿ ನೀಡುವ ಬಗ್ಗೆ ಮತ್ತೊಮ್ಮೆ ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಲು ಪರಿಶೀಲಿಸಲಾಗುತ್ತಿದೆ. ಸದರಿ ಪ್ರಕರಣದಲ್ಲಿ ಆರ್ಥಿಕ ಇಲಾಖೆಯ ಅಭಿಪ್ರಾಯ ಪಡೆದ ನಂತರ ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮವಹಿಸಲಾಗುವುದು.

**(ಸಂ:ಇಡಿ 317 ಟಿಇಸಿ 2023)**

**(ಡಾ. ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು